ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1732/2018

ಚಾಸಾ:8 ಪ್ರಾಸಾ:5

ದಿನಾಂಕ: 25.10.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಮಂಜುನಾಥ ಪೂಜಾರಿ |
| ತಂದೆಯ ಹೆಸರು | : | ಲಕ್ಷ್ಮಣ ಪೂಜಾರಿ |
| ವಯಸ್ಸು | : | 54 ವರ್ಷ |
| ಉದ್ಯೋಗ | : | ಮನೆ ಕೆಲಸ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಮೃತ ಸಂಕು ಪೂಜಾರ್ತಿ ರವರ ಪರಿಚಯ ಇದೆ. ಆರೋಪಿಯ ಪರಿಚಯ ಇಲ್ಲ. ಸಾಕ್ಷಿಗೆ ನಿಪಿ.2 ನ್ನು ತೋರಿಸಿದ್ದು, ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ನಿಪಿ.4 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ದಾಖಲೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವಾಗ ಮಾಡಿದ್ದು ಎಂದು ತಿಳಿದಿಲ್ಲ. ನಿಪಿ.4ನ್ನು ಎಲ್ಲಿ ತೆಗೆದಿರುವುದು ಎಂದು ನೆನಪಿಲ್ಲ. ಎಷ್ಟು ಸಹಿ ಮಾಡಿದೆ ಎಂದು ನೆನಪಿಲ್ಲ. ನಿಪಿ.2 ರಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿಲ್ಲ. ನಿಪಿ.4 ರಲ್ಲಿ ಕಂಡು ಬರುವ ಜಾಗ ಯಾವುದು ಎಂದು ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ:03.09.2018 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ನಾನು ಮತ್ತು ಚಾಸಾ-9 ಹಾಜರಿದ್ದು, ಚಾಸಾ.1ರವರು ತೋರಿಸಿದ ಸ್ಥಳದಲ್ಲಿ ನಮ್ಮ ಸಮಕ್ಷಮ ಪಂಚನಾಮೆಯನ್ನು ಬೆಳಿಗ್ಗೆ 11 ರಿಂದ 11-45 ರವರೆಗೆ ಪಂಚನಾಮೆ ಮಾಡಿ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ಕ್ರಮವನ್ನು ನನ್ನ ಸಮಕ್ಷಮ ಮಾಡಿ ನಿಪಿ.4ರ ಪೋಟೋ

ತೆಗೆದಿದ್ದರೂ ಆರೋಪಿಯು  ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**